# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಮಾತೃದೇವತೆಯ ಕೋಪ ಬದುಕು ಕಳೆಸುವುದು
ಜನುಮದಾತನ ಕೋಪ ದಾರಿ ಸುಗಮಗೊಳಿಸುವುದು
ಗುರುವಿನ ಕೋಪ ಜ್ಞಾನಾಭಿವೃದ್ಧಿ ಮಾಡುವುದು
ಹೆಣ್ಣಿನ ಕೋಪ ಜೀವನವನ್ನೇ ಮುಗಿಸುವುದು
ವೈರಾಗಿಯ ಕೋಪ ಮತಿ ಕೆಡಿಸುವುದು
ಹಿರಿಯರ ಕೋಪ ಕರ್ಮ ಹೆಚ್ಚಿಸುವುದು
ದೇವಾದಿ ದೇವತೆಯ ಕೋಪ ಕುಂಠಿತಗೊಳಿಸುವುದು
ಬಡವನ ಕೋಪ ದವಡೆಗೆ ಮೂಲವಾಗುವುದು
ಅನ್ನದಾತನ ಕೋಪ ಹಸಿವಿನಿಂದ ನರಳಿಸುವುದು
ಕೋಪ ತಾಪವ ಬಿಟ್ಟು ಬದುಕಿದರೆ ಮುಕ್ತಿ ಸಿಗುವುದು

**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 10-01-2025 to 16-01-2025 ಬೆಲೆ: 7-00 ಸಂಪುಟ–4 ಸಂಚಿಕೆ–29 ಪುಟಗಳು–6


ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು





ನಾಡಿನ ಸಮಸ್ತ ಜನತೆಗೆ
ಸಂಕ್ರಾಂತಿ ಹಬ್ಬದ
ಹಾರ್ದಿಕ ಶುಭಾಶಯಗಳು
ಕರಾವಳಿ ತರಂಗಿಣಿ
ಮಂಗಳೂರು

ಪ್ರವಾಸ ಎಂದರೆ ಯಾವುದಾದರೂ ಬೀಚ್‌ಗೆ ಹೋಗುವ ಯೋಚನೆ ಮಾಡುವವರು ಹೆಚ್ಚಾಗಿದ್ದಾರೆ. ಕಡಲಿನ ಮನೋಹರತೆ ಮರುಳಾಗದಿರುವವರು ಬಹಳ ಕಡಿಮೆ. ಆದರೆ ಆ ಸೌಂದರ್ಯಕ್ಕೆ ಮರುಳಾಗಿ ತನ್ನ ಜೀವವನ್ನು ಅಪಾಯಕ್ಕೆ ಒಡ್ಡಿಕೊಳ್ಳುವವರನ್ನು ನಾವು ಆಗಾಗ ನೋಡುತ್ತೇವೆ. ಸಮಯ ಕಳೆಯಲು ಕಡಲ ಕಿನಾರೆಗೆ ಹೋಗುವುದು ತಪ್ಪಲ್ಲ. ಆದರೆ ಅಲ್ಲಿ ಹುಚ್ಚಾಟ ಆಡಿದರೆ ಅಪಾಯ ಕಟ್ಟಿಟ್ಟ ಬುತ್ತಿ ಎನ್ನುವುದುದನ್ನು ಮರೆಯಬಾರದು.

## ಆಯುಷ್ಮಾನ್ ಯೋಜನೆಗೆ ಅಡ್ಡಗಾಲು –ಕ್ಯಾ.ಚೌಟ



**ಮಂಗಳೂರು:** ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ದೇಶದಲ್ಲಿ 70ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ 5ಲಕ್ಷ ರೂ.ವರೆಗೆ ಉಚಿತ ಚಿಕಿತ್ಸೆ ನೀಡುವುದಕ್ಕೆ ಪ್ರಾರಂಭಿಸಿರುವ ಪಿಎಂ–ಆಯುಷ್ಮಾನ್ ಭಾರತ್ ಯೋಜನೆಗೆ ಸಿದ್ದರಾಮಯ್ಯ ಸರ್ಕಾರ ಅಡ್ಡಗಾಲು ಹಾಕುವ ಮೂಲಕ ಬಡವರ ಅದರಲ್ಲಿಯೂ ಹಿರಿಯ ನಾಗರಿಕರ ಜೀವದ ಜತೆಗೆ ಚೆಲ್ಲಾಟವಾಡುವ ಅತ್ಯಂತ ಕೀಳು ಮಟ್ಟದ ರಾಜಕೀಯ ಮಾಡುತ್ತಿರುವುದು ಬಹಳ ಖೇದಕರ ವಿಚಾರ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ **3ನೇ ಪುಟಕ್ಕೆ**

## ಷಾ ಬರಮಾಡಿಕೊಂಡಾಗ ಯಾಕೆ ಬೆಚ್ಚಿ ಬಿದ್ದಿಲ್ಲ –ಸಿದ್ದರಾಮಯ್ಯ



**ಬೆಂಗಳೂರು:** ರಾಜ್ಯದಲ್ಲಿ ಆರು ಮಂದಿ ನಕ್ಸಲೀಯರು ಶರಣಾಗುತ್ತಿರುವಾಗ ಬೆಚ್ಚಿಬಿದ್ದಿರುವ ಬಿಜೆಪಿ ಶಾಸಕ ಸುನೀಲ್ ಕುಮಾರ್ ಅವರು ಕಳೆದ ತಿಂಗಳು ಚತ್ತೀಸ್‌ಘಢದಲ್ಲಿ ಶರಣಾದ 30 ನಕ್ಸಲರನ್ನು ಕೇಂದ್ರ ಗೃಹಸಚಿವ ಅಮಿತ್ ಷಾ ಅವರೇ ಖುದ್ದಾಗಿ ಬರಮಾಡಿಕೊಂಡು ಆನಂದಬಾಷ್ಪ ಸುರಿಸಿದಾಗ ಯಾಕೆ ಬೆಚ್ಚಿ ಬಿದ್ದಿಲ್ಲ ಎಂದು ಪ್ರಶ್ನಿಸಿದ್ದಾರೆ. ಷಾ ಅವರಿಗೆ ನಕ್ಸಲರ ಬಗ್ಗೆ ಯಾಕೆ ಇಷ್ಟೊಂದು ಪ್ರೀತಿ ಎಂದು ಕೇಳುವ ದಮ್ಮು ಸುನೀಲ್ ಕುಮಾರ್ ಅವರಿಗೆ ಇದೆಯೇ? ಕಳೆದ ವರ್ಷ **3ನೇ ಪುಟಕ್ಕೆ**

## ಕಾಂಗ್ರೆಸ್ ನಾಯಕರ ಆರೋಪ ಸುಳ್ಳು: ಮೇಯರ್



**ಮಂಗಳೂರು:** ಮಹಾನಗರ ಪಾಲಿಕೆ ವ್ಯಾಪ್ತಿಯ ಜನರಿಗೆ ಸಂಸ್ಕರಿಸಿದ ನೀರನ್ನೇ ಪೂರೈಕೆ ಮಾಡಲಾಗುತ್ತಿದೆ. ಆದರೆ, ನಗರದ ಅರ್ಧದಷ್ಟು ಪ್ರದೇಶಗಳಿಗೆ ಸಂಸ್ಕರಿಸದ ನೀರು ಪೂರೈಕೆ ಮಾಡಲಾಗುತ್ತಿದೆ ಎಂಬ ವಿಪಕ್ಷ ಕಾಂಗ್ರೆಸ್ ನಾಯಕರ ಆರೋಪ ಸುಳ್ಳು ಎಂದು ಮೇಯರ್ ಮನೋಜ್ ಕುಮಾರ್ ಕೋಡಿಕಲ್ ಹೇಳಿದ್ದಾರೆ. ನೀರು ಶುದ್ಧೀಕರಣ ನಡೆಯುವ ಬೆಂದೂರು ಘಟಕಕ್ಕೆ ತಾನು ಭೇಟಿ ನೀಡಿದ್ದು, ಅಶುದ್ಧ ನೀರು ಸರಬರಾಜು ಆಗುವುದು ಕಂಡುಬಂದಿಲ್ಲ. ಯಾವುದೇ ಕಾರಣಕ್ಕೂ ನಗರದ ಜನರಿಗೆ **3ನೇ ಪುಟಕ್ಕೆ**






# ಸುದ್ದಿ ತುಣುಕು

ತುಮಕೂರು ಸಹಕಾರಿ ಹಾಲು ಉತ್ಪಾದಕರ ಒಕ್ಕೂಟದ ಚುನಾವಣೆಯ ಫಲಿತಾಂಶ ಪ್ರಕಟವಾಗಿದ್ದು, ಚಿಕ್ಕನಾಯಕನಹಳ್ಳಿಯಲ್ಲಿ ಮಾಧು ಸ್ವಾಮಿ ಬೆಂಬಲಿಗ ಅಭ್ಯರ್ಥಿ ಭರ್ಜರಿ ಜಯ ಗಳಿಸಿದ್ದಾರೆ.

ಹಳೆಯ ನಾಣ್ಯಗಳ ಖರೀದಿ ನೆಪದಲ್ಲಿ ಮಂಗಳೂರಿನ ವ್ಯಕ್ತಿಯೊಬ್ಬರಿಗೆ 58ಲಕ್ಷ ವಂಚಿಸಿದ ಘಟನೆ ನಡೆದಿದ್ದು, ಕಾವೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅಂಬೇಡ್ಕರ್ ಕುರಿತು ಅಮಿತ್ ಶಾ ಹೇಳಿಕೆ ಖಂಡಿಸಿ ವಿಜಯನಗರದಲ್ಲಿ ಬಂದ್‌ಗೆ ಕರೆ ನೀಡಲಾಗಿದ್ದು, ಹೊಸಪೇಟೆ ಬಸ್ ನಿಲ್ದಾಣ ಖಾಲಿ ಖಾಲಿಯಾಗಿ ಕಂಡುಬಂತು. ಇನ್ನೊಂದೆಡೆ, ಬೀದರ್‌ನಲ್ಲಿ ವ್ಯಾಪಾರ-ವಹಿವಾಟು ಸ್ಥಗಿತಗೊಂಡಿತ್ತು.

ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ದಾವಣಗೆರೆ ನಗರದಲ್ಲಿ ಗಲ್ಲಿಗೊಂದು ಕ್ಯಾಮೆರಾ ಅಳವಡಿಸಲಾಗಿದೆ.

ಎಲ್‌ಐಸಿ ಪಾಲಿಸಿಯ ಇಸಿಎಸ್ ಹಣವನ್ನು ಸರಿಯಾದ ಸಮಯಕ್ಕೆ ಕಟಾಯಿಸಿ ನೀಡದ ಬ್ಯಾಂಕ್, ಸಂಬಂಧಿತ ಅರ್ಜಿದಾರರಿಗೆ ಒಂದು ಲಕ್ಷ ರೂ. ಪರಿಹಾರ ನೀಡಬೇಕೆಂದು ಶಿವಮೊಗ್ಗ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶಿಸಿತು.

ಬೆಂಗಳೂರು ವಕೀಲರ ಸಂಘದಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಬೇಕು ಎಂದು ಆಗ್ರಹಿಸಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ಹೈಕೋರ್ಟ್ ವಜಾಗೊಳಿಸಿದೆ.

ಬಿಎಂಟಿಸಿಯ ಪ್ರತಿದಿನ, ಸಾಪ್ತಾಹಿಕ ಮತ್ತು ಮಾಸಿಕ ಪಾಸುಗಳ ದರವನ್ನು ಪರಿಷ್ಕರಿಸಿದ್ದು, ಜ.9 ರಿಂದ ಜಾರಿಗೆ ಬರುವಂತೆ ದರ ಹೆಚ್ಚಿಸಿ ಆದೇಶವನ್ನು ಹೊರಡಿಸಿದೆ.

ಹೂಡಿಕೆದಾರರಿಗೆ ವಂಚನೆ ಪ್ರಕರಣ ಹಿನ್ನೆಲೆಯಲ್ಲಿ ಹೀರಾ ಗೋಲ್ಡ್ ಕಂಪನಿ ಹಾಗೂ ನೌಹೆರಾ ಶೇಕ್ ಒಡೆತನದ 103.4 ಕೋಟಿ ಮೌಲ್ಯದ ಸ್ಥಿರಾಸ್ತಿಯನ್ನು ಇ.ಡಿಜಪ್ತಿ ಮಾಡಿದೆ.

ಸಮುದ್ರದಲ್ಲಿ ಈಜುವಾಗ ಮೂವರು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಮೃತಪಟ್ಟ ಘಟನೆ ಸುರತ್ಕಲ್ ಬಳಿ ಸಂಭವಿಸಿದೆ.

ಬಸವನಗುಡಿಯ ಶ್ರೀ ಸಾಯಿ ಪಾರ್ಟಿ ಹಾಲ್‌ನಲ್ಲಿ ಶರವಣ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಜ. 10ರಂದು ವೈಕುಂಠ ಏಕಾದಶಿ ಇದ್ದು, ಅದರ ಅಂಗವಾಗಿ ಭಕ್ತರಿಗೆ 1 ಲಕ್ಷ ಲಡ್ಡು ವಿತರಣಾ ಕಾರ್ಯಕ್ರಮಕ್ಕೆ ವಿಶೇಷ ಪೂಜೆ ಸಲ್ಲಿಸಿ ವಿಧಾನಪರಿಷತ್ ಜೆಡಿಎಸ್ ಸದಸ್ಯ ಟಿ. ಎ. ಶರವಣ ಚಾಲನೆ ನೀಡಿದರು.

ಜನರ ಆಸ್ತಿಪಾಸ್ತಿ, ಮಾನ-ಪ್ರಾಣ ರಕ್ಷಿಸಿ ನೆಮ್ಮದಿಯ ಬದುಕಿಗೆ ಸುರಕ್ಷಿತ ವಾತಾವರಣ ಸೃಷ್ಟಿಸುವ ಜವಾಬ್ದಾರಿ ಪೊಲೀಸ್ ಇಲಾಖೆಯ ಮೇಲಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಮಧ್ಯಮ ಮತ್ತು ಕೆಳಮಧ್ಯಮ ವರ್ಗದವರು, ವಿದ್ಯಾರ್ಥಿಗಳು, ಹಿರಿಯ ನಾಗರಿಕರು ಮತ್ತು ಸರಕಾರಿ ನೌಕರರನ್ನು ಗಮನದಲ್ಲಿಟ್ಟುಕೊಂಡು ಸರಕಾರಿ ಸ್ವಾಮ್ಯದ ಎಂಎಸ್‌ಐಎಲ್ ಇದೀಗ ಆಕರ್ಷಕ ಟೂರ್ ಪ್ಯಾಕೇಜ್ ನೀಡಲು ಮುಂದಾಗಿದೆ.

1978ರ ಸಂಭಾಲ್‌ನಲ್ಲಿ ನಡೆದಿದ್ದ ಗಲಭೆಗಳ ಬಗ್ಗೆ ಹೊಸದಾಗಿ ತನಿಖೆ ನಡೆಸುವಂತೆ ಉತ್ತರ ಪ್ರದೇಶ ಸರಕಾರ ಆದೇಶಿಸಿದ್ದು, ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಪೊಲೀಸರಿಗೆ ಸೂಚಿಸಿದೆ.

ಹಕ್ಕಿಜ್ವರಕ್ಕೆ ತುತ್ತಾಗಿದ್ದ ಕೋಳಿಯನ್ನು ತಿಂದು ಹುಲಿ, ಚಿರತೆ ಸಾವನ್ನಪ್ಪಿರುವ ಸಾಧ್ಯತೆ ಇದೆ. ಆದರೆ ಪ್ರಯೋಗಾಲಯದ ವರದಿ ಬಂದ ಬಳಿಕವೇ ಘಟನೆಯನ್ನು ದೃಢೀಕರಿಸಲು ಸಾಧ್ಯವಿದೆ ಎಂದು ಮಹಾರಾಷ್ಟ್ರ ಸಚಿವರು ತಿಳಿಸಿದ್ದಾರೆ.

ಬೌದ್ಧಿಕ ಅಂಗವಿಕಲ ಮಹಿಳೆಗೆ ತಾಯಿಯಾಗುವ ಹಕ್ಕಿಲ್ಲವೇ ಎಂದು ಬಾಂಬೆ ಹೈಕೋರ್ಟ್ ಪ್ರಶ್ನಿಸಿದೆ.

# ಹಲಸಿನ ಹಣ್ಣಿನ ಪಾಯಸ



**ಬೇಕಾಗುವ ಸಾಮಗ್ರಿ :**

ಹಲಸಿನ ತೊಳೆ – 2 ಕಪ್
ಗಟ್ಟಿ ತೆಂಗಿನ ಕಾಯಿ ಹಾಲು – 2 ಕಪ್
ತೆಳು ತೆಂಗಿನ ಕಾಯಿ ಹಾಲು – 2 ಕಪ್
ಬೆಲ್ಲ – 1 ಕಪ್
ಗೋಡಂಬಿ – 10
ದ್ರಾಕ್ಷಿ – 10
ಏಲಕ್ಕಿ – 5
ತುಪ್ಪ – 2 ಚಮಚ

**ಮಾಡುವ ವಿಧಾನ :**

ಮೊದಲಿಗೆ ಒಂದು ಪಾತ್ರೆಗೆ 2 ಕಪ್ ನೀರು ಹಾಕಿ ಬಿಸಿ ಮಾಡಿಕೊಳ್ಳಬೇಕು. ನೀರು ಒಂದು ಕುದಿ ಬರುವಾಗ ತುಂಡರಿಸಿದ ಹಲಸಿನ ತೊಳೆಯನ್ನು ಹಾಕಿ ಚೆನ್ನಾಗಿ ಬೇಯಿಸಬೇಕು. ಹಲಸಿನ ತೊಳೆ ಚೆನ್ನಾಗಿ ಬೆಂದ ಬಳಿಕ ಬೆಲ್ಲ ಹಾಕಿ ಕುದಿಸಿ. ಬಳಿಕ ಎರಡು ಕಪ್ ತೆಳ್ಳಗಿನ ತೆಂಗಿನ ಹಾಲು ಬೆರೆಸಿ 10–15 ನಿಮಿಷ ಕುದಿಸಬೇಕು. ಹಲಸು, ಬೆಲ್ಲ ಮತ್ತು ಹಾಲಿನ ಮಿಶ್ರಣ ಕುದಿದು ಪರಿಮಳ ಬರುವಾಗ 2 ಕಪ್ ತೆಂಗಿನಕಾಯಿಯ ಗಟ್ಟಿ ಹಾಲು ಮತ್ತು ಏಲಕ್ಕಿ ಪುಡಿ ಬೆರೆಸಿ ಒಂದು ಸುತ್ತು ತಿರುವಿ ಒಂದು ಕುದಿ ಬಂದ ನಂತರ, ಇದಕ್ಕೆ ತುಪ್ಪದಲ್ಲಿ ಹುರಿದ ಗೋಡಂಬಿ, ದ್ರಾಕ್ಷಿ ಹಾಕಿದರೆ ರುಚಿಕರವಾದ ಹಲಸಿನ ಹಣ್ಣಿನ ಪಾಯಸ ಸವಿಯಲು ಸಿದ್ಧ.

# ಕ್ಯಾಲಿಫೋರ್ನಿಯಾದಲ್ಲಿ ಕಾಡ್ಗಿಚ್ಚು




ಅಮೆರಿಕ : ಕ್ಯಾಲಿಫೋರ್ನಿಯಾದಲ್ಲಿ ಕೆಟ್ಟ ಹವಾಮಾನದಿಂದಾಗಿ ಭಾರಿ ಪ್ರಮಾಣದ ಕಾಡ್ಗಿಚ್ಚು ಸಂಭವಿಸಿದೆ. ಮಾಲಿಬುವಿ ಎಂಬಲ್ಲಿನ ಉತ್ತರದ ಬೆಟ್ಟಗಳಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಪೆಸಿಫಿಕ್ ಪಾಲಿಸೇಡ್ಸ್‌ನಲ್ಲಿರುವ ಮನೆಗಳಿಗೆ ವಿನಾಶದ ಬೆದರಿಕೆ ಉಂಟಾಗಿದೆ. ಪಾಲಿಸೇಡ್ಸ್ ಬೆಂಕಿ ಇನ್ನೂ ನಿಯಂತ್ರಣಕ್ಕೆ ಬಂದಿಲ್ಲ. ಬೀಸುತ್ತಿರುವ ಬಲವಾದ ಗಾಳಿ ನಿಲ್ಲದೇ ಇದ್ದರೆ ಕಾಡ್ಗಿಚ್ಚು ಇನ್ನಷ್ಟು ಅಪಾಯಕಾರಿಯಾಗಬಹುದು ಎಂದು ಹೇಳಲಾಗುತ್ತಿದೆ.

# ಟಿಬೆಟ್‌ನಲ್ಲಿ ಪ್ರಬಲ ಭೂಕಂಪ




ನವದೆಹಲಿ: ಟಿಬೆಟ್‌ನಲ್ಲಿ ಸಂಭವಿಸಿದ ಪ್ರಬಲ ಭೂಕಂಪನದಲ್ಲಿ ಮೃತಪಟ್ಟವರ ಸಂಖ್ಯೆ 95ಕ್ಕೆ ಏರಿದೆ. ಹಲವರು ಗಾಯಗೊಂಡಿದ್ದಾರೆ. 95 ಜನ ಮೃತಪಟ್ಟಿರುವುದು ದೃಢಪಟ್ಟಿದೆ ಮತ್ತು 130 ಜನರು ಗಾಯಗೊಂಡಿದ್ದಾರೆ ಎಂದು ಸುದ್ದಿ ಸಂಸ್ಥೆ ವರದಿ ಮಾಡಿದೆ. ಭೂಮಿ ನಡುಗಿದ್ದು, ರಿಕ್ಟರ್ ಮಾಪಕದಲ್ಲಿ 7.1ರಷ್ಟು ತೀವ್ರತೆ ದಾಖಲಾಗಿದೆ. ಕಂಪನ ಅತಿ ಪ್ರಬಲವಾಗಿದೆ ಎಂದು ವರದಿಯಾಗಿದೆ. ಇಲ್ಲಿನ 200 ಕಿಮೀ ವ್ಯಾಪ್ತಿಯಲ್ಲಿ ಕಳೆದ ಐದು ವರ್ಷಗಳಲ್ಲಿ ಇಂದು ಸಂಭವಿಸಿದ ಕಂಪನ ಅತಿ ಪ್ರಬಲವಾಗಿದೆ ಎಂದು ವರದಿಯಾಗಿದೆ.

# ಕೆನಡಾ ಪ್ರಧಾನಿ ಹುದ್ದೆಗೆ ಜಸ್ಟಿನ್ ಟ್ರುಡೊ ರಾಜೀನಾಮೆ



ಒಟ್ಟಾವ: ಕೆನಡಾ ಪ್ರಧಾನಿ ಹುದ್ದೆಗೆ ರಾಜೀನಾಮೆ ಸಲ್ಲಿಸುವುದಾಗಿ ಜಸ್ಟಿನ್ ಟ್ರುಡೊ ಪ್ರಕಟಿಸಿದರು. ಆಡಳಿತಾರೂಢ ಲಿಬರಲ್ ಪಕ್ಷವು ಹೊಸ ನಾಯಕನನ್ನು ಆಯ್ಕೆ ಮಾಡುವ ಪ್ರಕ್ರಿಯೆ ಪ್ರಾರಂಭಿಸಲು ಕೇಳಿಕೊಂಡಿರುವುದಾಗಿ ಅವರು ತಿಳಿಸಿದ್ದಾರೆ. ತಮ್ಮ ನಾಯಕತ್ವದ ಮೇಲೆ ಹೆಚ್ಚುತ್ತಿರುವ ಅಸಮಾಧಾನ ಹಾಗೂ ಕಳೆದ ವರ್ಷಾಂತ್ಯದಲ್ಲಿ ಹಣಕಾಸು ಸಚಿವೆಯ ಹಠಾತ್ ರಾಜೀನಾಮೆಯಂಥ ಬೆಳವಣಿಗೆಗಳು ಸರ್ಕಾರದೊಳಗಿನ ಬಿಕ್ಕಟ್ಟನ್ನು ತೋರಿಸಿದ್ದವು. ಟ್ರುಡೊ 2015ರಲ್ಲಿ ಆಯ್ಕೆಯಾದಾಗ ಕೆನಡಾದ ಇತಿಹಾಸದಲ್ಲಿ ಎರಡನೇ ಕಿರಿಯ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು.

# ತಾಲಿಬಾನ್‌ಗೆ ಪಾಕಿಸ್ಥಾನ ಎಚ್ಚರಿಕೆ



ಇಸ್ಲಾಮಾಬಾದ್: ಅಫ್ಘಾನಿಸ್ತಾನದ ಪಕ್ತಿಕಾ ಪ್ರಾಂತ್ಯದ ಮೇಲೆ ಇತ್ತೀಚೆಗೆ ತಾನು ನಡೆಸಿದ ವೈಮಾನಿಕ ದಾಳಿಯನ್ನು ಸಮರ್ಥಿಸಿಕೊಂಡಿರುವ ಪಾಕಿಸ್ಥಾನ ಸರ್ಕಾರ, ಅಗತ್ಯ ಬಿದ್ದರೆ ಅಫ್ಘಾನಿಸ್ತಾನದೊಳಗಿನ ತೆಹ್ರೀಕ್-ಎ-ತಾಲಿಬಾನ್ ಪಾಕಿಸ್ಥಾನ (ಟಿಟಿಪಿ) ಸಂಘಟನೆಯ ಅಡಗುತಾಣಗಳ ಮೇಲೆ ಮತ್ತೆ ದಾಳಿ ನಡೆಸುವುದಾಗಿ ಹೇಳಿದೆ. ತಾಲಿಬಾನ್ ದಂಗೆಕೋರರಿಗೆ ಅಫ್ಘಾನಿಸ್ಥಾನ ಸುರಕ್ಷಿತ ಆಶ್ರಯವನ್ನು ಒದಗಿಸುತ್ತಿದೆ ಮತ್ತು ಪಾಕಿಸ್ಥಾನದೊಳಗೆ ಭಯೋತ್ಪಾದಕ ಚಟುವಟಿಕೆ ನಡೆಸಲು ಅವರನ್ನು ಬೆಂಬಲಿಸುತ್ತಿದೆ ಎಂದು ಇಸ್ಲಾಮಾಬಾದ್ ಆರೋಪಿಸಿದೆ.

# ಹಿಜ್ಬುಲ್ಲಾಗೆ ಇಸ್ರೇಲ್ ಎಚ್ಚರಿಕೆ



ಇಸ್ರೇಲ್: ಲಿಟಾನಿ ನದಿಯ ಉತ್ತರ ದಿಕ್ಕಿನಲ್ಲಿ ನಿಯೋಜಿಸಲಾಗಿರುವ ಪಡೆಗಳನ್ನು ಹಿಂತೆಗೆದುಕೊಳ್ಳದಿದ್ದರೆ ಇಸ್ರೇಲ್ ಕದನ ವಿರಾಮ ಒಪ್ಪಂದವನ್ನು ಮುರಿಯಲಿದೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹಿಜ್ಬುಲ್ಲಾಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ. ಕದನ ವಿರಾಮದ ನಿಯಮಗಳ ಪ್ರಕಾರ, ಲಿಟಾನಿ ನದಿಯ ಉತ್ತರ ದಿಕ್ಕಿನಲ್ಲಿ ನಿಯೋಜಿಸಲಾಗಿರುವ ಹೋರಾಟಗಾರರು ಮತ್ತು ಶಸ್ತ್ರಾಸ್ತ್ರಗಳನ್ನು ಜನವರಿ 26ರೊಳಗೆ ಹಿಜ್ಬುಲ್ಲಾ ಹಿಂತೆಗೆದುಕೊಳ್ಳಬೇಕಿದೆ.

# ಹೌತಿ ನೆಲೆಗಳ ಮೇಲೆ ಅಮೆರಿಕ ನೌಕಾಪಡೆ ದಾಳಿ



ಸನಾ: ಅಮೇರಿಕ ನೇತೃತ್ವದ ನೌಕಾಪಡೆಯ ಮೈತ್ರಿಕೂಟವು ರವಿವಾರ ಬೆಳಗ್ಗೆ ಉತ್ತರ ಯೆಮೆನ್‌ನ ಸಾಡಾ ಪ್ರಾಂತ್ಯದ ಮೇಲೆ ಮೂರು ವೈಮಾನಿಕ ದಾಳಿಗಳನ್ನು ನಡೆಸಿದೆ ಎಂದು ಹೌತಿ ಅಧೀನದ ಅಲ್-ಮಸಿರಾ ಟಿವಿ ವರದಿ ಮಾಡಿದೆ. ಹೌತಿ ಉಗ್ರರ ಮಿಲಿಟರಿ ತಾಣಗಳ ಮೇಲೆ ಈ ದಾಳಿ ನಡೆಸಲಾಗಿದೆ ಎಂದು ಸ್ಥಳೀಯರು ಸಾಮಾಜಿಕ ಮಾಧ್ಯಮಗಳಲ್ಲಿ ಹೇಳಿಕೊಂಡಿದ್ದಾರೆ. ಆದರೆ ಈ ಬಗ್ಗೆ ಅಮೆರಿಕ ಸೇನೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

# ಯುಎಸ್ ರಹಸ್ಯವಾಗಿ ಉಕ್ರೇನ್‌ಗೆ ಹಣ, ಶಸ್ತ್ರಾಸ್ತ್ರ ನೀಡಿತ್ತು : ಬ್ಲಿಂಕೆನ್



ವಾಶಿಂಗ್ಟನ್: ರಷ್ಯಾ ಉಕ್ರೇನ್ ಮೇಲೆ ಯುದ್ಧ ಆರಂಭಿಸುವ ಐದು ತಿಂಗಳು ಮುನ್ನವೇ ಅಮೆರಿಕವು ಉಕ್ರೇನ್‌ಗೆ ರಹಸ್ಯವಾಗಿ ಶಸ್ತ್ರಾಸ್ತ್ರಗಳನ್ನು ಕಳುಹಿಸಿತ್ತು ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಆಂಟನಿ ಬ್ಲಿಂಕೆನ್ ಒಪ್ಪಿಕೊಂಡಿದ್ದಾರೆ. ನ್ಯೂಯಾರ್ಕ್‌ಗೆ ಟೈಮ್ಸ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, "ಯುದ್ಧ ಆರಂಭವಾಗಲಿದೆ ಎಂಬುದು ನಮಗೆ ಗೊತ್ತಾಗಿತ್ತು. ಹೀಗಾಗಿ ಉಕ್ರೇನ್ ಅನ್ನು ಯುದ್ಧಕ್ಕೆ ಸಿದ್ಧಗೊಳಿಸುವುದಕ್ಕಾಗಿ ಸೆಪ್ಟೆಂಬರ್ 2021ರಿಂದ ಅಮೆರಿಕ ಉಕ್ರೇನ್‌ಗೆ ಬಿಲಿಯನ್‌ಗಟ್ಟಲೆ ಡಾಲರ್‌ಗಳನ್ನು ಮತ್ತು ಶಸ್ತ್ರಾಸ್ತ್ರಗಳನ್ನು ಕಳುಹಿಸಿತ್ತು" ಎಂದರು.

# ಐರ್ಲೆಂಡ್ ವಿರುದ್ಧದ ಏಕದಿನ ಸರಣಿಗೆ ಭಾರತ ತಂಡ ಪ್ರಕಟ




ಜನವರಿ 10 ರಿಂದ ಆರಂಭವಾಗಲಿರುವ ಐರ್ಲೆಂಡ್ ಜೊತೆಗಿನ ಏಕದಿನ ಸರಣಿಗಾಗಿ 15 ಆಟಗಾರ್ತಿಯರನ್ನು ಒಳಗೊಂಡ ಭಾರತ ಮಹಿಳಾ ತಂಡವನ್ನು ಬಿಸಿಸಿಐ ಸೋಮವಾರ ಪ್ರಕಟಿಸಿದೆ. ಸ್ಮೃತಿ ಮಂಧಾನ ನಾಯಕತ್ವದಲ್ಲಿ ಈ ಸರಣಿಗೆ ತಂಡವನ್ನು ಆಯ್ಕೆ ಮಾಡಲಾಗಿದ್ದು. ದೀಪ್ತಿ ಶರ್ಮಾ ಉಪನಾಯಕಿಯಾಗಿ ಆಯ್ಕೆಯಾಗಿದ್ದಾರೆ. ಭಾರತ ಮತ್ತು ಐರ್ಲೆಂಡ್ ನಡುವಿನ ಈ ಸರಣಿ ಜನವರಿ 10 ರಿಂದ ರಾಜ್‌ಕೋಟ್‌ನಲ್ಲಿ ನಡೆಯಲಿದೆ. ಬಳಿಕ ಜ.12 ಎರಡು ಮತ್ತು ಜ.15 ರಂದು ಅಂತಿಮ ಪಂದ್ಯ ನಡೆಯಲಿದೆ.

# ಸಿಡ್ನಿ ಟೆಸ್ಟ್ : ಭಾರತಕ್ಕೆ 6 ವಿಕೆಟ್ ಸೋಲು



ಸಿಡ್ನಿ: ಆಸ್ಟ್ರೇಲಿಯಾ ವಿರುದ್ಧ ಇಲ್ಲಿನ ಸಿಡ್ನಿ ಕ್ರಿಕೆಟ್ ಮೈದಾನದಲ್ಲಿ ನಡೆದ ಬಾರ್ಡರ್-ಗವಾಸ್ಕರ್ ಟ್ರೋಫಿಯ ಅಂತಿಮ ಪಂದ್ಯದಲ್ಲಿ 6 ವಿಕೆಟ್‌ಗಳಿಂದ ಸೋತ ಭಾರತ ತಂಡ, ಸರಣಿಯನ್ನು 3–1 ಅಂತರದಲ್ಲಿ ಕೈಚೆಲ್ಲಿದೆ. ಇದರೊಂದಿಗೆ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ರೇಸ್‌ನಿಂದಲೂ ಟೀಂ ಇಂಡಿಯಾ ಹೊರಬಿತ್ತು. ಭರ್ಜರಿ 6 ವಿಕೆಟ್ ಗೆಲುವಿನೊಂದಿಗೆ ಕಾಂಗರೂ ಪಡೆ ಸತತ ಎರಡನೇ ಬಾರಿಗೆ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ (ಡಬ್ಲ್ಯುಟಿಸಿ) ಫೈನಲ್ ಪ್ರವೇಶಿಸಿದೆ.

# ಹುಬ್ಬಳ್ಳಿ-ಧಾರವಾಡ ಸ್ಮಾರ್ಟ್ ಸಿಟಿ ಕಾಮಗಾರಿ ಪೂರ್ಣ



ಹುಬ್ಬಳ್ಳಿ: ಹುಬ್ಬಳ್ಳಿ-ಧಾರವಾಡ ಸ್ಮಾರ್ಟ್ ಸಿಟಿ ಯೋಜನೆಯಡಿ ಮಹಾನಗರ ವ್ಯಾಪ್ತಿಯಲ್ಲಿ 63 ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿತ್ತು. ಇದರಲ್ಲಿ 60 ಯೋಜನೆಗಳು ಈಗಾಗಲೇ ಪೂರ್ಣಗೊಂಡಿದ್ದು, 3 ಯೋಜನೆಗಳಷ್ಟೇ ಬಾಕಿ ಉಳಿದಿವೆ. ಹುಬ್ಬಳ್ಳಿ ಹಳೆ ಬಸ್ ನಿಲ್ದಾಣ, ಸಾಯಿಮಂದಿರದ ಎದುರಿನ ಮಲ್ಟಿ ಲೆವಲ್ ಕಾರ್ ಪಾರ್ಕಿಂಗ್, ಲೋಹಿಯಾ ನಗರದ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಕೆಲಸ ಬಾಕಿ ಇದ್ದು, ಮಾರ್ಚ್ ತಿಂಗಳಾಂತ್ಯಕ್ಕೆ ಎಲ್ಲಾ ಯೋಜನೆಗಳನ್ನು ಪೂರ್ಣಗೊಳಿಸಲು ಅಧಿಕಾರಿಗಳು ಉತ್ಸುಕರಾಗಿದ್ದಾರೆ.

# ವರ್ತುಲ ರಸ್ತೆ ಯೋಜನೆಯ ತ್ವರಿತ ಅನುಷ್ಠಾನ-ಗಡ್ಕರಿ




ಬೆಂಗಳೂರು: ರಾಜಧಾನಿ ಬೆಂಗಳೂರು ನಗರದ ವಾಹನ ದಟ್ಟಣೆ ತಗ್ಗಿಸುವ ಉಪ ನಗರ ವರ್ತುಲ ರಸ್ತೆ ಯೋಜನೆ (ಎಸ್‌ಟಿಆರ್ ಆರ್) ಕುರಿತು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರದ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರೊಂದಿಗೆ ಮಹತ್ವದ ಮಾತುಕತೆ ನಡೆಸಿದರು. ನೆನೆಗುದಿಗೆ ಬಿದ್ದಿದ್ದ ಈ ಯೋಜನೆಗೆ ವೇಗ ನೀಡುವಂತೆ ಮನವಿ ಮಾಡಿದರು.

# ಜ.21ಕ್ಕೆ "ಗಾಂಧಿ ಭಾರತ ಕಾರ್ಯಕ್ರಮ"



ಬೆಂಗಳೂರು: ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನದ ಹಿನ್ನೆಲೆಯಲ್ಲಿ ಮುಂದೂಡಿಕೆಯಾಗಿದ್ದ 'ಗಾಂಧಿ ಭಾರತ' ಕಾರ್ಯಕ್ರಮ ಜನವರಿ 21ರಂದು ನಡೆಯಲಿದೆ. ಬೆಳಗಾವಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಗಾಂಧಿ ಪ್ರತಿಮೆ ಅನಾವರಣ ಹಾಗೂ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

# ಬಜೆಟ್ ಅನುದಾನ ಬಳಕೆ ಸ್ಥಿತಿಗತಿ ಬಗ್ಗೆ ಪ್ರಗತಿ ಪರಿಶೀಲನೆ..!



ಬೆಂಗಳೂರು: ಹಿಂದುಳಿದ ಹಾಗೂ ಪರಿಶಿಷ್ಟ ಜಾತಿ(ಎಸ್‌ಸಿ) ಸಮಾಜದ ಕಲ್ಯಾಣಕ್ಕಾಗಿ ರಚಿಸಲ್ಪಟ್ಟಿರುವ ವಿವಿಧ ಅಭಿವೃದ್ಧಿ ನಿಗಮಗಳಿಗೆ ಕೋಟ್ಯಂತರ ರೂಪಾಯಿ ಅನುದಾನ ಬಜೆಟ್‌ನಲ್ಲಿ ಮೀಸಲಿಡಲಾಗುತ್ತದೆ. 2024-25 ಆರ್ಥಿಕ ವರ್ಷದ ಮುಕ್ಕಾಲು ವರ್ಷ ಮುಗಿದರೂ, ಸಮುದಾಯವಾರು ಅಭಿವೃದ್ಧಿ ನಿಗಮಗಳಿಗೆ ಇದುವರೆಗೂ ಹಣ ಬಿಡುಗಡೆ ಮಾಡಿಲ್ಲ. ಪ್ರಗತಿ ಪರಿಶೀಲನೆಗೆ ಸಿಎಂ ಸಿದ್ದರಾಮಯ್ಯ ಅವರು ಮುಂದಾಗಿದ್ದಾರೆ.

# ರಾಜ್ಯಪಾಲರಿಗೆ ಸರ್ವಾಧಿಕಾರದ ಕ್ರಮಕ್ಕೆ ಸಿಎಂ ಖಂಡನೆ




ಬೆಂಗಳೂರು: "ವಿಶ್ವವಿದ್ಯಾಲಯ ಧನಸಹಾಯ ಆಯೋಗದ (ಯುಜಿಸಿ) ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿ, ರಾಜ್ಯದ ವಿಶ್ವವಿದ್ಯಾಲಯಗಳ ಉಪಕುಲಪತಿಗಳ ನೇಮಕಾತಿಗೆ ಸಂಬಂಧಿಸಿದಂತೆ ರಾಜ್ಯಪಾಲರಿಗೆ ಸರ್ವಾಧಿಕಾರ ನೀಡುವ ಮೂಲಕ ಕೇಂದ್ರವು ರಾಜ್ಯ ಸರ್ಕಾರಗಳ ಅಧಿಕಾರವನ್ನು ಕಿತ್ತುಕೊಳ್ಳಲು ಹೊರಟಿದೆ. ರಾಜ್ಯ ಸರ್ಕಾರಗಳ ಅಧಿಕಾರವನ್ನು ಮೊಟಕುಗೊಳಿಸುದನ್ನು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡಿಸಿದ್ದಾರೆ.

# ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಹೆಚ್ಚಳಕ್ಕೆ ಕ್ರಮ




ಬೆಂಗಳೂರು: ರಾಜ್ಯದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಗೌರವಧನ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭರವಸೆ ನೀಡಿದ್ದಾರೆ. ವಿಧಾನಸೌಧದ ತಮ್ಮ ಕೊಠಡಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಬೇಡಿಕೆ ಹಾಗೂ ಕುಂದುಕೊರತೆಗಳ ಬಗ್ಗೆ ಸಚಿವರು ಚರ್ಚೆ ನಡೆಸಿದರು. ಗೌರವಧನ ಹೆಚ್ಚಳ, ಮುಂಬಡ್ತಿ, ಗ್ರಾಚ್ಯುಟಿ ಸೌಲಭ್ಯ, ಉಚಿತ ವೈದ್ಯಕೀಯ ಸೌಲಭ್ಯ ಬಗ್ಗೆ ಸಚಿವರು ಚರ್ಚಿಸಿದರು.

# ತಾಯಂದಿರ ಮರಣ ತಡೆಗಟ್ಟಲು ಕ್ರಮಕ್ಕೆ ಸೂಚನೆ



ಬೆಂಗಳೂರು: ತಾಯಂದಿರ ಮರಣ ತಡೆಗಟ್ಟಲು ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ಸಿಎಂ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಮುಖ ಕಾರ್ಯಕ್ರಮಗಳ ಪ್ರಗತಿ ಪರೀಶೀಲನಾ ಸಭೆಯಲ್ಲಿ ಮಾತನಾಡಿ, ತಾಯಂದಿರ ಮರಣವನ್ನು ಶೂನ್ಯಕ್ಕೆ ಇಳಿಸಲು ವ್ಯಾಪಕ ಅಭಿಯಾನ ಆರಂಭಿಸಬೇಕು. ಹೆರಿಗೆ ಪ್ರಮಾಣಕ್ಕೆ ಅನುಗುಣವಾಗಿ ಆಸ್ಪತ್ರೆಗಳಲ್ಲಿ ಪ್ರಸೂತಿ ತಜ್ಞರು ಮತ್ತು ಅರವಳಿಕೆ ತಜ್ಞರನ್ನು ನೇಮಕ ಮಾಡಬೇಕು ಎಂದರು.

# ಎಲ್‌ಎಲ್‌ಬಿ ಕೋರ್ಸ್‌ಗೆ ಪಿಯುಸಿ ಪ್ರಮಾಣಪತ್ರ ಅಗತ್ಯವಿಲ್ಲ



ಬೆಂಗಳೂರು: ಬಾರ್ ಕೌನ್ಸಿಲ್ ಆಫ್ ಇಂಡಿಯಾ ನಿಯಮ 5ರ ಪ್ರಕಾರ ಮೂರು ವರ್ಷದ ಕಾನೂನು ಪದವಿಗೆ (ಎಲ್‌ಎಲ್‌ಬಿ) ನೋಂದಣಿಯಾಗಲು ಮೂರು ವರ್ಷದ ಯಾವುದೇ ಪದವಿ ಪ್ರಮಾಣ ಪತ್ರ ಹೊಂದಿದ್ದಲ್ಲಿ, ಪಿಯುಸಿ ಉತ್ತೀರ್ಣರಾದ ಪ್ರಮಾಣಪತ್ರದ ಅಗತ್ಯತೆ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಐದು ವರ್ಷದ ಕಾನೂನು ಪದವಿಗೆ ಅರ್ಜಿ ಸಲ್ಲಿಸಿದಾಗ ಎಸ್.ಎಸ್.ಎಲ್.ಸಿ. ಪಾಸಾದ ಬಳಿಕ ಎರಡು ವರ್ಷ ಅಧ್ಯಯನ ಅವಶ್ಯವಾಗಿರಲಿದೆ ಎಂದು ಪೀಠ ಹೇಳಿದೆ.

# ಜನ ಗಣ ಮನ ಅಲ್ಲ, ವಂದೇ ಮಾತರಂ ರಾಷ್ಟ್ರಗೀತೆಯಾಗಲಿ



ಮಹಾರಾಷ್ಟ್ರ : 'ಜನ ಗಣ ಮನ' ಬದಲಿಗೆ 'ವಂದೇ ಮಾತರಂ' ಭಾರತದ ರಾಷ್ಟ್ರಗೀತೆಯಾಗಬೇಕು. ಇದಕ್ಕಾಗಿ ದೇಶದಲ್ಲಿ ಹೋರಾಟ ಸಂಘಟಿಸಬೇಕಿದೆ ಎಂದು ಧಾರ್ಮಿಕ ಮುಖಂಡ ರಾಮಗಿರಿ ಮಹಾರಾಜ್ ಹೇಳಿದ್ದಾರೆ. 'ಮಿಷನ್ ಅಯೋಧ್ಯೆ' ಸಿನಿಮಾದ ಟ್ರೇಲರ್ ಬಿಡುಗಡೆಗೆ ಮಹಾರಾಷ್ಟ್ರಕ್ಕೆ ಬಂದ ಅವರು ಬಂಕಿಮ್‌ಚಂದ್ರ ಚಟರ್ಜಿ ಅವರು ರಚಿಸಿರುವ ವಂದೇ ಮಾತರಂ ನಮ್ಮ ರಾಷ್ಟ್ರಗೀತೆಯಾಗಬೇಕು ಎಂಬುದು ನಮ್ಮ ನಿಲುವು. ಇದಕ್ಕಾಗಿ ದೊಡ್ಡ ಮಟ್ಟದಲ್ಲಿ ಹೋರಾಟ ನಡೆಸುವ ಕಾಲ ಬಂದಿದೆ ಎಂದರು.

# ಶೀಶ್ ಮಹಲ್ ವಿವಾದ: ಆಪ್ ನಾಯಕರನ್ನು ತಡೆದ ಪೊಲೀಸರು




ನವದೆಹಲಿ: ಎಎಪಿ- ಬಿಜೆಪಿ ನಡುವೆ ರಾಜಕೀಯ ತಾರಕಕ್ಕೇರಿರುವ 'ಶೀಶ್ ಮಹಲ್' ಆರೋಪ ಇದೀಗ ರಾಷ್ಟ್ರ ರಾಜಧಾನಿಯಲ್ಲಿ ದೊಡ್ಡ ಹೈಡ್ರಾಮಕ್ಕೆ ಕಾರಣವಾಗಿದೆ. ಬಿಜೆಪಿಗರು ಶೀಶ್ ಮಹಲ್ ಗುರಿಯಾಗಿಸಿ ಟೀಕಿಸಿರುವ ಬೆನ್ನಲ್ಲೇ ಇಂದು ಎಎಪಿ ನಾಯಕರಾದ ಸೌರಭ್ ಭಾರಧ್ವಾಜ್ ಮತ್ತು ಸಂಜಯ್ ಸಿಂಗ್ ಮಾಧ್ಯಮಗಳೊಂದಿಗೆ ಸಿಎಂ ನಿವಾಸ ತೋರಿಸಲು ಬಂಗಲೆ ಬಳಿಕ ಹೆಜ್ಜೆ ಹಾಕಲು ಪ್ರಯತ್ನಿಸಿದರು. ಈ ವೇಳೆ ಅವರನ್ನು ಬಂಗಲೆ ಎದುರು ದೆಹಲಿ ಪೊಲೀಸರು ತಡೆದು ನಿಲ್ಲಿಸಿದರು.

# ಸಾಧ್ವಿಯಾದ 'ಮಿಸ್ ವರ್ಲ್ಡ್ ಟೂರಿಸಂ' ಕಿರೀಟ ಗೆದ್ದ ನಟಿ..!



ಮಧ್ಯ ಪ್ರದೇಶ: ಸಿನಿಮಾ ನಟಿ ಹಾಗೂ ಮಿಸ್ ವರ್ಲ್ಡ್ ಟೂರಿಸಂ ಬ್ಯುಸಿನೆಸ್ ವುಮೆನ್ ಆಫ್ ದಿ ವರ್ಲ್ಡ್ ಪ್ರಶಸ್ತಿ ಗೆದ್ದ ಇಶಿಕಾ ತನೇಜಾ ಐಹಿಕ ಸುಖಭೋಗಗಳನ್ನು ತೊರೆದು ಸಾಧ್ವಿಯಾಗಿದ್ದಾರೆ. ಸಿನಿಮಾ ಹಾಗೂ ಗ್ಲಾಮರಸ್ ಜಗತ್ತಿನಿಂದ ವಿಮುಖರಾಗಿರುವ ಅವರು ಅಲೌಕಿಕ ದಾರಿಯಲ್ಲಿ ಸಾಗುವ ಗಟ್ಟಿ ನಿರ್ಧಾರ ತಳೆದಿದ್ದಾರೆ. ಜಬಲ್‌ಪುರದ ಶಂಕರಚಾರ್ಯ ಸ್ವಾಮಿ ಸದಾನಂದ ಸರಸ್ವತಿ ಮಹಾರಾಜ್‌ರಿಂದ ಇಶಿಕಾ ಸನ್ಯಾಸ ದೀಕ್ಷೆ ಪಡೆದಿದ್ದಾರೆ.

# ಇಸ್ರೋ ನೂತನ ಮುಖ್ಯಸ್ಥರಾಗಿ ವಿ. ನಾರಾಯಣನ್ ಆಯ್ಕೆ



ನವದೆಹಲಿ: ದೇಶದ ಹಿರಿಯ ಗಗನಯಾತ್ರಿ ಮತ್ತು ಕ್ರಯೋಜೆನಿಕ್ ಎಂಜಿನ್ ತಜ್ಞ ವಿ.ನಾರಾಯಣನ್ ಇಸ್ರೋದ ನೂತನ ಮುಖ್ಯಸ್ಥರಾಗಲಿದ್ದಾರೆ. ಹಾಲಿ ಮುಖ್ಯಸ್ಥ ಎಸ್.ಸೋಮನಾಥ್ ಎರಡು ವರ್ಷಗಳ ಅಧಿಕಾರಾವಧಿ ಪೂರ್ಣಗೊಳಿಸಿದ ನಂತರ ಜನವರಿ 14ರಂದು ನಿವೃತ್ತರಾಗಲಿದ್ದಾರೆ. ನಾರಾಯಣನ್ ಪ್ರಸ್ತುತ ತಮಿಳುನಾಡಿನ ಮಹೇಂದ್ರಗಿರಿಯಲ್ಲಿರುವ ಇಸ್ರೋದ ಎಲ್‌ಪಿಎಸ್‌ಸಿಯ ನಿರ್ದೇಶಕರಾಗಿದ್ದಾರೆ. ವಲಿಯಮಲದಲ್ಲಿರುವ ಲಿಕ್ವಿಡ್ ಪ್ರೊಪಲ್ಷನ್ ಸಿಸ್ಟಮ್ ಸೆಂಟರ್ ನಿರ್ದೇಶಕರಾಗಿಯೂ ಕೆಲಸ ಮಾಡುತ್ತಿದ್ದಾರೆ.

# ಮೈಸೂರಿನಲ್ಲಿ ರೈಲ್ವೆ ರಕ್ಷಣಾ ಪಡೆ ತರಬೇತಿ ಕೇಂದ್ರ ಸ್ಥಾಪನೆ



ಮೈಸೂರು : ಮೈಸೂರಿನ ಕೆ. ಆರ್ ನಗರದಲ್ಲಿ ರೈಲ್ವೆ ರಕ್ಷಣಾ ಪಡೆಯ ತರಬೇತಿ ಕೇಂದ್ರ ಆರಂಭಿಸುವುದಾಗಿ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಅವರು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ ಕುಮಾರಸ್ವಾಮಿ ಅವರಿಗೆ ಭರವಸೆ ನೀಡಿದ್ದಾರೆ. ನವದೆಹಲಿಯಲ್ಲಿ ತಮ್ಮನ್ನು ಭೇಟಿಯಾಗಿ ಈ ಬಗ್ಗೆ ಚರ್ಚೆ ನಡೆಸಿದ ಕುಮಾರಸ್ವಾಮಿ ಅವರ ಮನವಿಗೆ ತತ್ ಕ್ಷಣವೇ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದರು.

# ಇವಿಎಂ ಹ್ಯಾಕಿಂಗ್ ಸಾಧ್ಯವಿಲ್ಲವೆಂದು 42 ಬಾರಿ ನ್ಯಾಯಾಲಯಗಳು ಹೇಳಿವೆ



ನವದೆಹಲಿ: ಇವಿಎಂಗಳನ್ನು ಹ್ಯಾಕ್ ಮಾಡಲು ಸಾಧ್ಯವಾಗದು ಮತ್ತು ಅವುಗಳನ್ನು ತಿರುಚಲಾಗಿದೆ ಎಂಬ ಆರೋಪಗಳು ಆಧಾರರಹಿತ ಎಂದು ನ್ಯಾಯಾಲಯಗಳು 42 ಬಾರಿ ತೀರ್ಪು ನೀಡಿವೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದ್ದಾರೆ. ಮತಯಂತ್ರಗಳನ್ನು ಹ್ಯಾಕ್ ಮಾಡಲಾಗುತ್ತಿದೆ ಎಂಬ ಪ್ರತಿಪಕ್ಷಗಳ ಆರೋಪವನ್ನು ಈ ಮೂಲಕ ಅವರು ಸಾರಾಸಗಟಾಗಿ ತಳ್ಳಿಹಾಕಿದ್ದಾರೆ.




## ಮನದ ಕಡಲಿನಿಂದ ಬಂತು ತುರ್ರಾ ಹಾಡು..



ಇ.ವಿ. ಎಂಟರ್‌ಟೈನರ್ಸ್ ಲಾಂಛನದಲ್ಲಿ ಈ. ಕೃಷ್ಣಪ್ಪ ಅವರು ನಿರ್ಮಿಸಿ, ಯೋಗರಾಜ್ ಭಟ್ ನಿರ್ದೇಶಿಸಿರುವ "ಮನದ ಕಡಲು" ಚಿತ್ರದ "ಹೂ ದುಂಬಿಯ ಕಥೆಯ" ಹಾಡು ಬಿಡುಗಡೆಯಾಗಿ ಎಲ್ಲರ ಮೆಚ್ಚುಗೆ ಪಡೆದುಕೊಂಡಿದೆ. ಇದೇ ಹೊತ್ತಿನಲ್ಲಿ ಚಿತ್ರದ ಮತ್ತೊಂದು ಗೀತೆ "ತುರ್ರಾ" ಹಾಡು ಬಿಡುಗಡೆಯಾಗಿದೆ. ನೆಲಮಂಗಲದ ಬಳಿಯಿರುವ ನಿರ್ಮಾಪಕ ಈ ಕೃಷ್ಣಪ್ಪರವರ ತೋಟದಲ್ಲಿ ಈ ಹಾಡು ಬಿಡುಗಡೆಯಾಯಿತು. ಯೋಗರಾಜ್ ಭಟ್ ಅವರೆ ಬರೆದಿರುವ ಈ ಹಾಡನ್ನು ಸಂಗೀತ ನಿರ್ದೇಶಕ ವಿ.ಹರಿಕೃಷ್ಣ, ಸಂಜಿತ್ ಹಗ್ಡೆ ಹಾಗೂ ಪ್ರಾರ್ಥನಾ ಹಾಡಿದ್ದಾರೆ. ಈ ಸಂದರ್ಭದಲ್ಲಿ ಸಹ ನಿರ್ಮಾಪಕ ಜಿ.ಗಂಗಾಧರ್, ಕಾರ್ಯಕಾರಿ ನಿರ್ಮಾಪಕ ಪ್ರತಾಪ್, ಛಾಯಾಗ್ರಾಹಕ ಸಂತೋಷ್ ರೈ ಪಾತಾಜೆ ಮತ್ತು ಚಿತ್ರದ ಬಳಗ ಸಮಾರಂಭದಲ್ಲಿ ಉಪಸ್ಥಿತರಿದ್ದರು.

## ಸಮಾಜಸೇವೆ ಶುರು ಹಚ್ಚಿದ ಕಿಚ್ಚ ಸುದೀಪ್..



ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಸಿನಿಮಾಗಳಲ್ಲಿ ಬ್ಯುಸಿ ಆಗಿದ್ದರೂ ಸದ್ದಿಲ್ಲದೇ ಸಮಾಜ ಸೇವೆ ಕೆಲಸಗಳಲ್ಲಿ ತೊಡಗಿಸಿಕೊಂಡು ಮಾದರಿಯಾಗಿದ್ದಾರೆ. ಈ ನಿಟ್ಟಿನಲ್ಲಿ ಇದೀಗ ಕಿಚ್ಚ ಸುದೀಪ್ ಕೇರ್ ಫೌಂಡೇಶನ್ ಎಂಬ ಹೊಸ ಚಾರಿಟೇಬಲ್ ಟ್ರಸ್ಟ್ ಪ್ರಾರಂಭಿಸಲಾಗಿದೆ. ಜೂನಿಯರ್ ಕಿಚ್ಚ ಸಂಚಿತ್ ಸಂಜೀವ್ ಈ ಫೌಂಡೇಶನ್ ಲೋಗೋ ಹಾಗೂ ಟೀ ಶರ್ಟ್ ಬಿಡುಗಡೆ ಮಾಡಿದರು.ಕಿಚ್ಚ ಸುದೀಪ್ ಕೇರ್ ಫೌಂಡೇಶನ್ ಅನೇಕ ಸಮಾಜಮುಖಿ ಕೆಲಸಗಳಿಗೆ ಮುಂದಾಗಿದೆ. ಆ ಪೈಕಿ ಶಿಕ್ಷಣ ಹಾಗೂ ವೈದ್ಯಕೀಯ ಸೇವೆ ಒದಗಿಸುವ ಮಹತ್ ಕಾರ್ಯಕ್ಕೆ ಮುಂದಾಗಿದೆ. ಈಗಾಗಲೇ ಕಿಚ್ಚ ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಅಭಿವೃದ್ಧಿಪಡಿಸಿದ್ದಾರೆ. ಈಗ ಕಿಚ್ಚ ಸುದೀಪ್ ಹೆಚ್ಚಾಗಿ ಸಮಾಜಮುಖಿ ಕೆಲಸಗಳಲ್ಲಿ ತೊಡಗಿಸಿಕೊಳ್ಳಲು ಮುಂದಾಗಿದ್ದಾರೆ.

## ತೆರೆಗೆ ಬಂತು "ಸಂಜು ವೆಡ್ಸ್ ಗೀತಾ–2"


ಶಿಡ್ಲಘಟ್ಟದ ರೇಶ್ಮೆ ಬೆಳೆಗಾರರು ಎದುರಿಸುತ್ತಿರುವ ಹಲವಾರು ಸಮಸ್ಯೆಗಳ ಜತೆಗೊಂದು ಪ್ರೇಮ ಕಾವ್ಯವನ್ನು ನಿರ್ದೇಶಕ ನಾಗಶೇಖರ್ ಅವರು "ಸಂಜು ವೆಡ್ಸ್ ಗೀತಾ–2" ಚಿತ್ರದ ಮೂಲಕ ಬೆಳ್ಳಿ ತೆರೆಯ ಮೇಲೆ ಹೇಳಹೊರಟಿದ್ದಾರೆ. ಈ ಚಿತ್ರ ಜ.10ರಂದು ಕರ್ನಾಟಕ ಅಲ್ಲದೆ ವಿದೇಶಗಳಲ್ಲೂ ಸಹ ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಪವಿತ್ರ ಇಂಟರ್ ನ್ಯಾಷನಲ್ ಮೂವೀಮೇಕರ್ಸ್ ಅಡಿಯಲ್ಲಿ ಚಲವಾದಿ ಕುಮಾರ್ ಅವರು ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ, ವಿಶೇಷವಾಗಿ ಈ ಚಿತ್ರದಲ್ಲಿ ಚೇತನ್ ಚಂದ್ರ, ರಾಗಿಣಿ ಗೆಸ್ಟ್ ಅಪೀಯರೆನ್ಸ್ ಆಗಿ ಕಾಣಿಸಿಕೊಂಡಿದ್ದಾರೆ, ಉಳಿದಂತೆ ಶ್ರೀಧರ್ ವಿ ಸಂಭ್ರಮ್ ಸಂಗೀತ, ಸತ್ಯ ಹೆಗಡೆ ಅವರ ಛಾಯಾಗ್ರಹಣ ಡಿಫರೆಂಟ್ ಡ್ಯಾನಿ ಅವರ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ, ರಂಗಾಯಣ ರಘು, ಸಾಧು ಕೋಕಿಲ, ತಬಲಾನಾಣಿ, ಗಿಚ್ಚಿಗಿಲಿಗಿಲಿ ವಿನೋದ್ ಅಲ್ಲದೆ ಖಳನಟ ಸಂಪತ್ ಕುಮಾರ್ ಅಭಿನಯಿಸಿದ್ದಾರೆ.



## "ರಾವಣಾಪುರ" ಇದೇ 17ಕ್ಕೆ ರಿಲೀಸ್..

ಕನ್ನಡ ಚಿತ್ರರಂಗದಲ್ಲಿ ಹೊಸ ಹೊಸ ಸಾಹಸಗಳು ನಡೆಯುತ್ತಲೇ ಇವೆ. ಆ ಪ್ರಯತ್ನಗಳು ಸೋತ್ರು ಗೆದ್ರು ಹೊಸಬರು ತಮ್ಮ ಪ್ರಯತ್ನ ನಿಲ್ಲಿಸುವುದಿಲ್ಲ. ಹಾಗೇ ಈಗ ಹೊಸ ತಂಡ ಸೇರಿಕೊಂಡು ರಾವಣಾಪುರ ಎಂಬ ಸಿನಿಮಾ ಮಾಡಿದ್ದು, ಈ ಚಿತ್ರವೀಗ ತೆರೆಗೆ ಬರಲು ಸಜ್ಜಾಗಿದೆ. ರಾವಣಾಪುರ ಸಿನಿಮಾದ ಟ್ರೇಲರ್ ಬಿಡುಗಡೆ ಬಳಿಕ ಮಾತನಾಡಿದ ನಿರ್ದೇಶಕ ಕುಮಾರ್ ಎಂ ಬಾವಗಳ್ಳಿ ಸಿನಿಮಾ ಟೆಕ್ನಿಕಲಾಗಿ ತುಂಬಾ ಸ್ಟ್ರಾಂಗ್ ಆಗಿದೆ. ಹಳೆ ವಿಷಯವನ್ನು ಇವತ್ತಿನ ಪೀಳಿಗೆಗೆ ಹೋಲುವಂತೆ ಚಿತ್ರ ಮಾಡಿದ್ದೇವೆ ಎಂದರು. ಈ ಸಿನಿಮಾದಲ್ಲಿ ರತ್ನನ್ ಕಲ್ಯಾಣ್, ರಕ್ಷಾ, ದಿಲೀಪ್ ಕುಮಾರ್ ಎಂ, ರಘು ಮುಖ್ಯ ಭೂಮಿಕೆಯಲ್ಲಿ ಅಭಿನಯಿಸಿದ್ದು, ಎಪಿ ಶ್ರೀನಾಥ್, ಸೂರ್ಯ ಆರ್ ಎನ್, ಮಂಜುನಾಥ್ ವಿಶಾಲ್ ಸಂಜಯ್ ಮತ್ತು ರಾಜೇಶ್ವರಿ ನಟಿಸಿದ್ದಾರೆ. ಸಿಂಗನಲ್ಲೂರು ಚೌಡೇಶ್ವರಿ ಕಂಬೈನ್ಸ್ ಬ್ಯಾನರ್‌ನಡಿ ಎಲ್ ನಾಗಭೂಷಣ ನಿರ್ಮಾಣ ಮಾಡಿದ್ದಾರೆ.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212